**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ ಚನ್ನರಾಯಪಟ್ಟಣ**

**ಸಿಸಿ ಸಂಖ್ಯೆ 1040/2021** **CW**-8 **PW**-6

**ಸಾಕ್ಷಿಯನ್ನು ದಿಃ 19.11.2025 ರಂದು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

| | |
|---|---|
| ಹೆಸರುಃ | ಕಿರಣ್ ಕುಮಾರ್ |
| ತಂದೆಯ ಹೆಸರುಃ | ದ್ಯಾವೇಗೌಡ |
| ವಯಸ್ಸುಃ | 46 ವರ್ಷ |
| ವೃತ್ತಿಃ | ಹೆಚ್ ಸಿ 250 ಚನ್ನರಾಯಪಟ್ಟಣ ನಗರ ಪೋಲೀಸ್ ಠಾಣೆ |
| ವಾಸ ಸ್ಥಳಃ | ಚನ್ನರಾಯಪಟ್ಟಣ |

**ಮುಖ್ಯವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ನಾನು 2020 ರಿಂದ ಇಲ್ಲಿಯವರೆಗೆ ನಾನು ಚನ್ನರಾಯಪಟ್ಟಣ ನಗರ ಠಾಣೆಯುಲ್ಲಿ ಹೆಚ್ ಸಿ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ .

ದಿಃ 25.03.2021 ರಂದು ನಾನು ಹಗಲು ಎಸ್ ಹೆಚ್ ಒ ಕರ್ತವ್ಯದಲ್ಲಿದ್ದಾಗ ಬೆಳಗ್ಗೆ 9.50 ರ ಸಮಯದಲ್ಲಿ ಚನ್ನರಾಯಪಟ್ಟಣದ ಸರ್ಕಾರಿ ಆಸ್ಪತ್ರೆಯಿಂದ ಎಂ ಎಲ್ ಸಿ ಬಂದಿದ್ದು ಅದರಂತೆ ಬೆಳಗ್ಗೆ 10.30 ರ ಸಮಯದಲ್ಲಿ ಸದರಿ ಆಸ್ಪತ್ರೆಗೆ ಹೋಗಿ ಚಾಸಾ-1 ರವರಿಂದ ಹೇಳಿಕೆ ದೂರನ್ನು ಪಡೆದು ಠಾಣೆಗೆ ಹಿಂದುರುಗಿ ಬೆಳಗ್ಗೆ 11.20 ರ ಸಮಯದಲ್ಲಿ ಸದರಿ ಹೇಳಿಕೆ ದೂರಿನ ಆದಾರದ ಮೇಲೆ ಮೊ ಸಂಖ್ಯೆ 86/2021 ರಂತೆ ಪ್ರಕರಣ ದಾಖಲಿಸಿ ಪ್ರ ವ ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಹಾಗೂ ಮೇಲಾಧಿಕಾರಿಗಳಿಗೆ ನಿವೇದಿಸಿಕೊಂಡಿರುತ್ತೇನೆ.

ಸಾಕ್ಷಿ ಹೇಳಿಕೆ ದೂರನ್ನು ನೋಡಿ ಗುರುತಿಸಿದ್ದು ಅದು ಈಗಾಗಲೇ ನಿಪಿ-1 ಎಂದು ಸಾಕ್ಷಿಯ ಸಹಿಯನ್ನು ನಿಪಿ-1(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿ ಪ್ರ ವ ವರದಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ-5 ಎಂದು ಸಾಕ್ಷಿಯ ಸಹಿಯನ್ನು ನಿಪಿ-5(ಎ) ಎಂದು ಗುರುತಿಸಲಾಯಿತು. ಅದೇ ದಿನ ಮುಂದಿನ ತನಿಖೆಗಾಗಿ ಕಡತವನ್ನು ಚಾಸಾ-9 ರವರಿಗೆ ಹಸ್ತಾಂತರಿಸಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಾದ ಶ್ರೀಮತಿ ಕೆ ಆರ್ ಎಸ್ ರವರಿಂದ ಃ**

ನಮಗೆ ಆಸ್ಪತ್ರೆಯಿಂದ ಯಾವುದೇ ಮೆಮೋ ಬಂದಿ ಲ್ಲ ಎಂದರೆ ಸರಿಯಲ್ಲ, ಚಾಸಾ-1 ರವರಿಂದ ಯಾವುದೇ ದೂರನ್ನು ಪಡೆದಿಲ್ಲ ಎಂದರೆ ಸರಿಯಲ್ಲ. ಚಾಸಾ-1 ಮತ್ತು ಅವರ ಅಣ್ಣ ಗೋಪಾಲಕೃಷ್ಣ ರವರ ಮಾತು ಕೇಳಿ ಸುಳ್ಳು ಪ್ರಕರಣ ದಾಖಲಸಿರುತ್ತೇನೆ ಎಂದರೆ ಸರಿಯಲ್ಲ. ಆಸ್ಪತ್ರೆಯಲ್ಲಿ ಚಾಸಾ-1 ರವರ ಜೊತೆ ಅವರನ್ನು ಆಸ್ಪತ್ರೆಗೆ ಸೇರಿದವರು ಇದ್ದರ. ಚಾಸಾ-1 ರವರ ಜೊತೆ ಇದ್ದವರು ಸಿ ಕೆ ಗೋಪಾಲಕೃಷ್ಣ ಎಂದರೆ ಸರಿ. ಅವರನ್ನು ಬಿಟ್ಟರೆ ಬೇರೆ ಯಾರು ಇರಲಿಲ್ಲ. ಸುಳ್ಳು ಪ್ರಕರಣ ದಾಖಲಿಸಿ ಸುಳ್ಳು ಸಾಕ್ಷ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರು ವಿಚಾರಣೆಃ ಇಲ್ಲಾ**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ).**

**ಓ ಹೇ ಕೇ ಸರಿ ಇದೆ.**

**(ಕುಸುಮ ವಿ.)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಚನ್ನರಾಯಪಟ್ಟಣ.**